ನಗರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆ ಮಾಡುವ ವಿಚಾರ ಸರ್ಕಾರದ ಗಮನದಲ್ಲಿಯೇ?

ಆ) ಹಾವೇರಿ ನಗರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾವೇರಿ ನಗರಕ್ಕೆ ಕುಡಿಯುವ ನೀರಿನ ತೊಂದರೆಯಿದ್ದರೂ ಸಹ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ?

ಈ) ಈ ಸಮಸ್ಯೆ ಬಗೆಹರಿಸಲು ತೆಗೆದುಕೊಂಡಿರುವ ಕ್ರಮವೇನು ಹಾಗೂ ಈ ಯೋಜನೆಗೆ ತಗಲುವ ವೆಚ್ಚವೆಷ್ಟು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು)

ಅ) ಇಲ್ಲ.

ಆ) ಬೇಸಿಗೆ ಕಾಲದಲ್ಲಿ ಮಾತ್ರ ತೊಂದರೆಯಿರುವುದು ಗಮನಕ್ಕೆ ಬಂದಿದೆ.

ಇ) ಬರಗಾಲ ಕಾಮಗಾರಿಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯಲಾಗಿದ್ದು ಇದರಿಂದ ತಾತ್ಕಾಲಿಕ ಕುಡಿಯುವ ನೀರಿನ ಅಭಾವವನ್ನು ನೀಗಿಸಲಾಗುತ್ತಿದೆ.

ಈ) ಸದ್ಯಕ್ಕೆ ನೀರಿನ ಸಮಸ್ಯೆಯನ್ನು ಹೋಗಲಾಡಿಸಲು ಯಾವುದೇ ಯೋಜನೆಯನ್ನು ಹಮ್ಮಿಕೊಳ್ಳಲಾಗಿಲ್ಲ.

"ಆಕ್ಟಾಯ್" ಯೋಜನೆ ಜಾರಿಗೆ ತರುವ ಬಗ್ಗೆ.

91-ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 'ಆಕ್ಟಾಯ್' ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರಲು ಸರ್ಕಾರ ಯೋಚಿಸುತ್ತಿದೆಯೇ?

ಆ) 'ಆಕ್ಟಾಯ್' ಜಾರಿಗೆ ತರುವುದರಿಂದ ಆಗುವ ಭಾದಕಗಳ ಬಗ್ಗೆ ಸರ್ಕಾರ ಪರಿಹಾರ ಯೋಚಿಸಿದೆಯೇ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು)

ಅ) ಹೌದು.

ಆ) ಪರಿಶೀಲಿಸಲಾಗುತ್ತಿದೆ.

ಕರ್ನಾಟಕ ರಾಜ್ಯ ಜನಗಣತಿ ಗುತ್ತಿಗೆ ಆಧಾರ ನೌಕರರ ಬಗ್ಗೆ

135 - ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕರ್ನಾಟಕ ರಾಜ್ಯದಲ್ಲಿ 1991ರ ಜನಗಣತಿ ಗುತ್ತಿಗೆ ಆಧಾರ ನೌಕರರ ಸೇವೆ 1992 ಮಾರ್ಚ್‌ಗೆ ಅಂತ್ಯಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಕರ್ನಾಟಕ ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳಿಗೆ ಈ ನೌಕರರನ್ನು ಭರ್ತಿ ಮಾಡಲು ಸರ್ಕಾರ ಯೋಚಿಸಿದೆಯೇ ? ಇನ್ನಾವುದಾದರೂ ರೂಪದಲ್ಲಿ ಈ ಜನಗಣತಿ ನೌಕರರಿಗೆ ನೌಕರಿ ದೊರಕಿಸುವ ಪ್ರಯತ್ನ ಸರ್ಕಾರ ಮಾಡುವುದೇ ?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು)